9

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 7/6/2020

# ಕೈ ನಿರ್ಧಾರದತ್ತ ಗೌಡರ ಕಣ್ಣು

7.6.2020

## ರಾಜ್ಯಸಭೆಗೆ ಸ್ಪರ್ಧೆ ಖಚಿತ | ಬಿಜೆಪಿ ಮನವೊಲಿಕೆಗೂ ಪ್ರಯತ್ನ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯಸಭೆ ಚುನಾವಣೆಗೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಸ್ಪರ್ಧಿಸುವುದು ಬಹುತೇಕ ನಿಶ್ಚಿತವಾಗಿದ್ದು, ನಾಮಪತ್ರ ಸಲ್ಲಿಕೆಯ ಕೊನೆಯ ದಿನವಾದ ಜೂ.9 ರಂದು ಉಮೇದುವಾರಿಕೆ ಸಲ್ಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ವಿಧಾನಸಭೆಯಲ್ಲಿ ಜೆಡಿಎಸ್ 34 ಸದಸ್ಯ ಬಲ ಹೊಂದಿದ್ದು, ಗೆಲುವಿಗೆ 45 ಮತಗಳು ಬೇಕು. ಕಾಂಗ್ರೆಸ್‌ನಲ್ಲಿ ಹೆಚ್ಚುವರಿಯಾಗಿ ಉಳಿಯುವ ಮತಗಳನ್ನು ಪಡೆಯಲು ದೇವೇಗೌಡರು ಹೈಕಮಾಂಡ್ ಜತೆ ಮಾತುಕತೆ ನಡೆಸಿದ್ದು, ಗ್ರೀನ್ ಸಿಗ್ನಲ್‌ಗಾಗಿ



ಕಾಯುತ್ತಿದ್ದಾರೆ ಎನ್ನಲಾಗಿದೆ. ಜತೆಗೆ ಬಿಜೆಪಿ ಮೂರನೇ ಅಭ್ಯರ್ಥಿಯನ್ನು ಕಣಕ್ಕಿಳಿಸದಂತೆಯೂ ದೇವೇಗೌಡರು ಪ್ರಧಾನಿ ಮೋದಿ ಮನವೊಲಿಸುವ ಸಾಧ್ಯತೆಗಳು ದಟ್ಟವಾಗಿವೆ ಎಂದು ಹೇಳಲಾಗುತ್ತಿದೆ.

**ಜೆಡಿಎಸ್‌ಗೆ ಆತಂಕ:** ದೇವೇಗೌಡರು ಈ ಚುನಾವಣೆಯಲ್ಲಿ ಸ್ಪರ್ಧಿಸದೇ ಹೋದರೆ ಪಕ್ಷ ಛಿದ್ರವಾಗುವ ಆತಂಕ ಜೆಡಿಎಸ್‌ಗೆ ಕಾಡುತ್ತಿದೆ. ರಾಜ್ಯಸಭೆಗೆ ಈ ಹಿಂದೆ ನಡೆದ ಎರಡು ಚುನಾವಣೆಗಳಲ್ಲಿ ಕೆಲವು ಶಾಸಕರು ವಿಪ್ ಉಲ್ಲಂಘಿಸಿ ಅಡ್ಡ ಮತದಾನ ಮಾಡಿ ವರಿಷ್ಠರಿಗೆ ಮುಖಭಂಗ ಉಂಟು ಮಾಡಿದ ಪ್ರಸಂಗಗಳೂ ನಡೆದಿವೆ. ದೇವೇಗೌಡರು ಸ್ಪರ್ಧಿಸದೇ ಹೋದರೆ ಪಕ್ಷದ ಅನೇಕ ಶಾಸಕರು ಬಿಜೆಪಿ ಕಣಕ್ಕಿಳಿಸಬಹುದಾದ ಮೂರನೇ ಅಭ್ಯರ್ಥಿ ಪರ ಮತ ಚಲಾಯಿಸುವ ಭೀತಿ ಮಾಜಿ ಸಿಎಂ ಕುಮಾರಸ್ವಾಮಿ ಸೇರಿ ಪಕ್ಷ ನಾಯಕರನ್ನು ಕಾಡುತ್ತಿದೆ. ಹಾಗಾಗಿ ಒಂದೆಡೆ ಶಾಸಕರನ್ನು ಹಿಡಿಟ್ಟುಕೊಳ್ಳುವ, ಇನ್ನೊಂದೆಡೆ ಅಧಿಕಾರ ಗದ್ದುಗೆ ಹಿಡಿಯುವ ಕಸರತ್ತಿಗೆ ದೇವೇಗೌಡರು ಕೈ ಹಾಕಿದ್ದಾರೆ ಎಂದು ರಾಜಕೀಯ ವಲಯದಲ್ಲಿ ವ್ಯಾಖ್ಯಾನಿಸಲಾಗುತ್ತಿದೆ.

**ಅವಿರೋಧ ಆಯ್ಕೆ ಸಾಧ್ಯತೆ:** ಬಿಜೆಪಿ ಸಂಖ್ಯಾ ಬಲದ ಮೇಲೆ ಇಬ್ಬರು ಅಭ್ಯರ್ಥಿಗಳನ್ನು ಕಣಕ್ಕಿಳಿಸಿ, ಕಾಂಗ್ರೆಸ್ ಒಬ್ಬರನ್ನು ಹುರಿಯಾಳನ್ನಾಗಿ ಮಾಡಿದರೆ ನಾಲ್ಕನೇ ಅಭ್ಯರ್ಥಿಯಾಗಿ ದೇವೇಗೌಡರು ಸ್ಪರ್ಧಿಸಿ ಅವಿರೋಧ ಆಯ್ಕೆಯಾಗುವ ಸಾಧ್ಯತೆಗಳೂ ಇವೆ ಎಂದು ಮೂಲಗಳು ಹೇಳುತ್ತಿವೆ.



**ಇಂದಿನ ರಾಜಕಾರಣಿಗಳಿಗೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಕಾಂಗ್ರೆಸ್ ಹಿರಿಯ ಮುಖಂಡ ಮಲ್ಲಿಕಾರ್ಜುನ ಖರ್ಗೆ ಅವರಂಥವರ ಮಾರ್ಗದರ್ಶನ ಅಗತ್ಯವಾಗಿದೆ. ರಾಜ್ಯಸಭೆ ಚುನಾವಣೆಗೆ ಬಿಜೆಪಿ ಅಭ್ಯರ್ಥಿ ವಿಚಾರದಲ್ಲಿ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾನು ಬದ್ಧ.**

| ರಮೇಶ್ ಜಾರಕಿಹೊಳಿ ಸಚಿವ



### ನಾಲ್ವರಿಗಷ್ಟೇ ಅವಕಾಶ

**ಕರೊನಾ ಹಿನ್ನೆಲೆಯಲ್ಲಿ ರಾಜ್ಯಸಭಾ ಚುನಾವಣೆ ಸಂಬಂಧ ಕೆಲವು ಮಾರ್ಗಸೂಚಿ ಬದಲಿಸಿಕೊಳ್ಳಲಾಗಿದೆ ಎಂದು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿ, ಚುನಾವಣಾಧಿಕಾರಿ ಎಂ.ಕೆ. ವಿಶಾಲಾಕ್ಷಿ ಹೇಳಿದರು. ಕರೊನಾ ವ್ಯಾಪಕ ಹರಡುವಿಕೆ ಹಿನ್ನೆಲೆಯಲ್ಲಿ ಮತದಾನಕ್ಕೆ ಅನುಸರಿಸಬೇಕಾದ ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುವುದು. ಅಭ್ಯರ್ಥಿ ಜತೆ ನಾಲ್ವರು ಮಾತ್ರ ನಾಮಪತ್ರ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗುತ್ತದೆ. ಮಾರ್ಗಸೂಚಿ ಪಾಲಿಸಲು ನೋಡಲ್ ಅಧಿಕಾರಿ ನೇಮಿಸಲಾಗಿದೆ. ಜೂ.2ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದ್ದು, ಇದುವರೆಗೆ ನಾಮಪತ್ರ ಸಲ್ಲಿಕೆಯಾಗಿಲ್ಲ. ಸಲ್ಲಿಕೆಗೆ ಜೂ.9, ವಾಪಸ್ ಪಡೆಯಲು ಜೂ.12 ಕಡೇ ದಿನ ಎಂದರು.**

### ಪಕ್ಷಾಂತರ ನಿಷೇಧ ಕಾಯ್ದೆ ಬಗ್ಗೆ ವಿಸ್ತೃತ ಚರ್ಚೆ

ಬೆಂಗಳೂರು: ಬಿಜೆಪಿ ಕೋರ್ ಕಮಿಟಿ ಶನಿವಾರ ನಡೆಸಿದ ಸಭೆಯಲ್ಲಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ನೇತೃತ್ವದಲ್ಲಿ ಪಕ್ಷಾಂತರ ನಿಷೇಧ ಕಾಯ್ದೆ ಬಗ್ಗೆ ವಿಸ್ತೃತ ಚರ್ಚೆ ನಡೆಸಲಾಗಿದೆ.

» **ಬಿಜೆಪಿ ಕೋರ್ ಕಮಿಟಿ ಸಭೆ ತೀರ್ಮಾನ**

ಸಭೆ ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಬಿಜೆಪಿ ಪ್ರಧಾನ ಕಾರ್ಯದರ್ಶಿ ಅರವಿಂದ ಲಿಂಬಾವಳಿ, ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣೆ ಮತದಾನದಲ್ಲಿ ಬೇರೆ ಬೇರೆ ಕಾನೂನಿದೆ. ವೈಯಕ್ತಿಕವಾಗಿ ಶಾಸಕರು ರಾಜೀನಾಮೆ ನೀಡುವಾಗ ಕಾನೂನು ತೊಡಕುಗಳನ್ನು ನಿವಾರಿಸಲು ಸಭೆ, ಚರ್ಚೆ, ಸಂವಾದ ನಡೆಸಲು ತೀರ್ಮಾನಿಸಲಾಗಿದೆ ಎಂದರು.

**ಜನಸಂಪರ್ಕ ಕಾರ್ಯಕ್ರಮ:** ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕರೊನಾ ನಿಯಂತ್ರಣ ಹಾಗೂ ಅನ್ಯದೇಶಗಳಿಗೆ ನೀಡಿರುವ ಕೊಡುಗೆ, ಆತ್ಮನಿರ್ಭರ ಭಾರತದಡಿ 20 ಲಕ್ಷ ಕೋಟಿ ರೂ. ಪರಿಹಾರ ಘೋಷಣೆ ಬಗ್ಗೆ ಜನರಿಗೆ ತಿಳಿಸಲು ಜನಸಂಪರ್ಕ ಕಾರ್ಯಕ್ರಮ ಮಾಡಲು ತೀರ್ಮಾನಿಸಲಾಗಿದೆ. ಕರೊನಾ ಮಹಾಮಾರಿ ವಿರುದ್ಧ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದರು.

## 14ಕ್ಕೆ ಡಿ.ಕೆ.ಶಿವಕುಮಾರ್ ಪದಗ್ರಹಣ

ಬೆಂಗಳೂರು: ಲಾಕ್‌ಡೌನ್ ನಿಯಮಾವಳಿಗಳು ಸಡಿಲವಾಗುತ್ತಿರುವ ಹಿನ್ನೆಲೆ ಕೆಪಿಸಿಸಿ ಅಧ್ಯಕ್ಷರಾಗಿ ಡಿ.ಕೆ. ಶಿವಕುಮಾರ್ ಜೂ.14ಕ್ಕೆ ಪದಗ್ರಹಣ ಮಾಡಲು ನಿರ್ಧರಿಸಿದ್ದಾರೆ. ಮೂರು ಬಾರಿ ನಿಗದಿಯಾಗಿದ್ದ ಪದಗ್ರಹಣ ಸಮಾರಂಭ ಸರ್ಕಾರ ಅನುಮತಿ ನೀಡದೆ ಮುಂದಕ್ಕೆ ಹೋಗಿತ್ತು. ಈ ಬಾರಿ ಅನುಮತಿ ಸಿಗಬಹುದೆಂದು ನಿರೀಕ್ಷೆಯ ಹಿನ್ನೆಲೆಯಲ್ಲಿ ಎಲ್ಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಕೆಪಿಸಿಸಿ ಕಚೇರಿಯಲ್ಲಿಯೇ ಸರಳವಾಗಿ ಕಾರ್ಯಕ್ರಮ ಆಯೋಜನೆ ಆಗುತ್ತಿದ್ದು, ಹಿಂದಿನ ಅಧ್ಯಕ್ಷ ದಿನೇಶ್ ಗುಂಡೂರಾವ್ ಅವರಿಂದ ಅಧಿಕಾರ ಸ್ವೀಕರಿಸಲಿದ್ದಾರೆ. ಹೆಚ್ಚು ಜನ ಸೇರಿಸದೆ ಸರಳವಾಗಿ ಸಮಾರಂಭ ಆಯೋಜಿಸಲಾಗುತ್ತಿದೆ. ಸಂವಿಧಾನದ ಪೀಠಿಕೆ ಓದುವ ಮೂಲಕ ಅಧಿಕಾರ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗುತ್ತಿದೆ. ಜೂನ್ 8ರ ನಂತರ ಸಿಎಂ ಅವರಲ್ಲಿ ಅನುಮತಿಗಾಗಿ ಕೋರಲಾಗುವುದು ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.



**ಮಲ್ಲಿಕಾರ್ಜುನ ಖರ್ಗೆ ಜೂ.8ರಂದು ನಾಮಪತ್ರ ಸಲ್ಲಿಸಲಿದ್ದಾರೆ. ಆ ಸಂದರ್ಭದಲ್ಲಿ ಕಾರ್ಯಕರ್ತರು ಬರುವುದು ಬೇಡ. ಫಲಿತಾಂಶ ಬಂದ ನಂತರ ಖರ್ಗೆ ಅವರೇ ಕಾರ್ಯಕರ್ತರ ಬಳಿಗೆ ಬರುತ್ತಾರೆ. ಆಗ ವಿಶ್ ಮಾಡಬಹುದು. ಕಾರ್ಯಕರ್ತರು ತುಂಬಿಕೊಂಡರೆ ಸಾಮಾಜಿಕ ಅಂತರ ಇರುವುದಿಲ್ಲ.**

| ಡಿ.ಕೆ. ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷ